All India Radio: Bangalore
National Bulletins In Kannada
14.08.2025 / 7.35 am
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**<><*<><>*><>**

ಮುಖ್ಯಾಂಶಗಳು

ಮುಖ್ಯಾಂಶಗಳು

೧. ೭೯ನೇ ಸ್ವಾತಂತ್ರ್ಯ ದಿನಾಚರಣೆಯ ಮುನ್ನಾ ದಿನವಾದ ಇಂದು ರಾಷ್ಟ್ರವನ್ನುದ್ದೇಶಿಸಿ ರಾಷ್ಟ್ರಪತಿ ದ್ರೌಪದಿ ಮುರ್ಮು ಭಾಷಣ

೨.ಹರ್ ಘರ್ ತಿರಂಗಾ ಅಭಿಯಾನ: ದೇಶದೆಲ್ಲಡೇ ದೇಶ ಭಕ್ತಿ ಸಾರುವ ಕಾರ್ಯಕ್ರಮಗಳ ಆಯೋಜನೆ

೩.ಭಾರತದ ಸೌರ ಪಿವಿ ಮಾಡ್ಯೂಲ್ ಉತ್ಪಾದನಾ ಸಾಮರ್ಥ್ಯ ೧೦೦ ಗಿಗಾವ್ಯಾಟ್‌ಗೆ ಏರಿಕೆ

೪.ಭಾರತದ ರಫ್ತಿನ ಮೇಲೆ ಅಮೆರಿಕದ ಸುಂಕಗಳ ಪರಿಣಾಮ ಅಲ್ಪಕಾಲಿಕ - ಭಾರತದ ಮುಖ್ಯ ಆರ್ಥಿಕ ಸಲಹೆಗಾರ

*><><><><><><><*

೭೯ನೇ ಸ್ವಾತಂತ್ರ್ಯ ದಿನಾಚರಣೆಯ ಮುನ್ನಾ ದಿನವಾದ ಇಂದು ರಾಷ್ಟ್ರಪತಿ ದ್ರೌಪದಿ ಮುರ್ಮು ರಾಷ್ಟ್ರವನ್ನುದ್ದೇಶಿಸಿ ಭಾಷಣ ಮಾಡಲಿದ್ದಾರೆ. ಈ ಭಾಷಣವು ಇಂದು ಸಂಜೆ ೭ ಗಂಟೆಯಿಂದ ಆಕಾಶವಾಣಿಯ ರಾಷ್ಟ್ರೀಯ ಜಾಲದಲ್ಲಿ ಪ್ರಸಾರವಾಗಲಿದೆ ಮತ್ತು ದೂರದರ್ಶನದ ಎಲ್ಲಾ ವಾಹಿನಿಗಳಲ್ಲಿ ಹಿಂದಿಯಲ್ಲಿ ಪ್ರಸಾರವಾಗಲಿದೆ. ನಂತರ ಇಂಗ್ಲಿಷ್ ಆವೃತ್ತಿಯನ್ನು ಪ್ರಸಾರ ಮಾಡಲಾಗುತ್ತದೆ. ದೂರದರ್ಶನದಲ್ಲಿ ಹಿಂದಿ ಮತ್ತು ಇಂಗ್ಲಿಷ್‌ನಲ್ಲಿ ಭಾಷಣದ ಪ್ರಸಾರದ ನಂತರ ದೂರದರ್ಶನದ ಪ್ರಾದೇಶಿಕ ವಾಹಿನಿಗಳು ಪ್ರಾದೇಶಿಕ ಭಾಷೆಗಳಲ್ಲಿ ಪ್ರಸಾರ ಮಾಡುತ್ತವೆ. ಆಕಾಶವಾಣಿಯು ಇಂದು ರಾತ್ರಿ ೯:೩೦ ಕ್ಕೆ ಪ್ರಾದೇಶಿಕ ಭಾಷಾ ಆವೃತ್ತಿಗಳನ್ನು ಆಯಾ ಪ್ರಾದೇಶಿಕ ಜಾಲತಾಣಗಳಲ್ಲಿ ಪ್ರಸಾರ ಮಾಡಲಿದೆ.

*><><><><><><><*

ಸ್ವಾತಂತ್ರ್ಯ ದಿನದಂದು ಸಂಪೂರ್ಣ ಭದ್ರತೆ ಖಚಿತಪಡಿಸಿಕೊಳ್ಳಲು, ದೆಹಲಿ ಪೊಲೀಸರು ಭದ್ರತಾ ವ್ಯವಸ್ಥೆಗಳನ್ನು ಮಾಡಿದ್ದಾರೆ. ಕಾನೂನು ಮತ್ತು ಸುವ್ಯವಸ್ಥೆಯನ್ನು ಕಾಪಾಡಿಕೊಳ್ಳಲು ಅರೆಸೇನಾ ಪಡೆಗಳು ಮತ್ತು ಕಮಾಂಡೋಗಳು ಸೇರಿದಂತೆ ಸಾವಿರಾರು ಭದ್ರತಾ ಸಿಬ್ಬಂದಿಗಳನ್ನು ನಿಯೋಜಿಸಲಾಗಿದೆ. ಸ್ವಾತಂತ್ರ್ಯ ದಿನಾಚರಣೆಯಲ್ಲಿ ಸಾರ್ವಜನಿಕರು ಭಾಗವಹಿಸಲು ಅನುಕೂಲವಾಗುವಂತೆ ದೆಹಲಿ ಮೆಟ್ರೋ ತನ್ನ ಎಲ್ಲಾ ಮಾರ್ಗಗಳಲ್ಲಿ ಬೆಳಗ್ಗೆ ೪ ಗಂಟೆಗೆ ತನ್ನ ಸೇವೆಗಳನ್ನು ಪ್ರಾರಂಭಿಸಲಿದೆ. ಪ್ರಧಾನಿ ನರೇಂದ್ರ ಮೋದಿ ಅವರು ನಾಳೆ ದೆಹಲಿಯ ಐತಿಹಾಸಿಕ ಕೆಂಪು ಕೋಟೆಯಿಂದ ಸ್ವಾತಂತ್ರ್ಯ ದಿನಾಚರಣೆಯ ಸಂದರ್ಭದಲ್ಲಿ ರಾಷ್ಟ್ರಧ್ವಜಾರೋಹಣ ಮಾಡಿ, ರಾಷ್ಟ್ರವನ್ನುದ್ದೇಶಿಸಿ ಮಾತನಾಡಲಿದ್ದಾರೆ. ಇದೇ ೧೫ ರಂದು ದೇಶದ ೭೬ನೇ ಸ್ವಾತಂತ್ರ್ಯ ದಿನಾಚರಣೆಯನ್ನು ಪೂರ್ಣ ಉತ್ಸಾಹ ಮತ್ತು ದೇಶಭಕ್ತಿಯಿಂದ ಆಚರಿಸಲು ದೇಶಾದ್ಯಂತ ಜನರು ಸಜ್ಜಾಗುತ್ತಿದ್ದಾರೆ. ಸ್ವಾತಂತ್ರ್ಯ ದಿನಾಚರಣೆಗೆ ಪೂರ್ವಭಾವಿಯಾಗಿ, ದೇಶಾದ್ಯಂತ ಜನರು ಹರ್ ಘರ್ ತಿರಂಗಾ ಅಭಿಯಾನದಲ್ಲಿ ಸಕ್ರಿಯವಾಗಿ ಭಾಗವಹಿಸುತ್ತಿದ್ದಾರೆ. ಈ ಅಭಿಯಾನದ ಭಾಗವಾಗಿ ದೇಶದೆಲ್ಲಡೇ ದೇಶ ಭಕ್ತಿ ಸಾರುವ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ಕೇಂದ್ರ ಗೃಹ ಸಚಿವ ಅಮಿತ್ ಶಾ ನಿನ್ನೆ ತಮ್ಮ ನಿವಾಸದಲ್ಲಿ ರಾಷ್ಟ್ರಧ್ವಜಾರೋಹಣ ಮಾಡಿದರು. ಜಮ್ಮು-ಕಾಶ್ಮೀರದ ಕಠುವಾ ಜಿಲ್ಲೆಯಲ್ಲಿ ನಡೆದ ತಿರಂಗಾ ಯಾತ್ರೆಯ ನೇತೃತ್ವವನ್ನು ಕೇಂದ್ರ ಸಚಿವ ಡಾ. ಜಿತೇಂದ್ರ ಸಿಂಗ್ ವಹಿಸಿದ್ದರು.

*><><><><><><*

ನವದೆಹಲಿಯಲ್ಲಿ ನಾಳೆ ನಡೆಯಲಿರುವ ಸ್ವಾತಂತ್ರ್ಯ ದಿನಾಚರಣೆಯಲ್ಲಿ ೨೮ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ಗ್ರಾಮ ಪಂಚಾಯತಿಗಳ ೨೧೦ ನಾಯಕರು ವಿಶೇಷ ಅತಿಥಿಗಳಾಗಿ ಭಾಗವಹಿಸಲಿದ್ದಾರೆ. ಈ ವರ್ಷದ ವಿಶೇಷ ಅತಿಥಿಗಳಲ್ಲಿ ಗಮನಾರ್ಹ ಸಂಖ್ಯೆಯ ಮಹಿಳಾ ನಾಯಕರು ಸೇರಿದ್ದಾರೆ. ಅವರು ತಮ್ಮ ಗ್ರಾಮ ಪಂಚಾಯತ್‌ಗಳಲ್ಲಿ ಉತ್ತಮ ಮೂಲಸೌಕರ್ಯ, ವರ್ಧಿತ ಸಾರ್ವಜನಿಕ ಸೇವೆಗಳು ಮತ್ತು ಎಲ್ಲರನ್ನೂ ಒಳಗೊಂಡ ಸಮುದಾಯ ಉಪಕ್ರಮಗಳಂತಹ ಸುಧಾರಣೆಗಳನ್ನು ತಂದಿದ್ದಾರೆ. ಈ ವಿಶೇಷ ಅತಿಥಿಗಳು ಹರ್ ಘರ್ ಜಲ ಯೋಜನೆ, ಪ್ರಧಾನ ಮಂತ್ರಿ ಆವಾಸ್ ಯೋಜನೆ ಮತ್ತು ಮಿಷನ್ ಇಂದ್ರ ಧನುಷ್ ನಂತಹ ಪ್ರಮುಖ ಸರ್ಕಾರಿ ಯೋಜನೆಗಳನ್ನು ಪೂರೈಸುವಲ್ಲಿ ಗಮನಾರ್ಹ ಯಶಸ್ಸನ್ನು ಸಾಧಿಸಿದ್ದಾರೆ.

ಈ ವಿಶೇಷ ಅತಿಥಿಗಳಿಗೆ ಔಪಚಾರಿಕ ಸನ್ಮಾನ ಕಾರ್ಯಕ್ರಮವನ್ನು ಇಂದು ನವದೆಹಲಿಯಲ್ಲಿ ನಡೆಸಲಾಗುವುದು ಎಂದು ಪಂಚಾಯತ್ ರಾಜ್ ಸಚಿವಾಲಯ ತಿಳಿಸಿದೆ.

*><><><><><><><*

ರಾಷ್ಟ್ರಪತಿ ದ್ರೌಪದಿ ಮುರ್ಮು ಇಂದು ರಾಷ್ಟ್ರಪತಿ ಭವನದಲ್ಲಿ ಅಮೃತ್ ಉದ್ಯಾನ ವನದ ವಾರ್ಷಿಕ ಪ್ರದರ್ಶನವನ್ನು ಉದ್ಘಾಟಿಸಲಿದ್ದಾರೆ. ಶನಿವಾರದಿಂದ ಸೆಪ್ಟೆಂಬರ್ ೧೪ ರವರೆಗೆ ಪ್ರತಿದಿನ ಬೆಳಗ್ಗೆ ೧೦ ರಿಂದ ಸಂಜೆ ೬ ರವರೆಗೆ ಇದು ಸಾರ್ವಜನಿಕರಿಗೆ ಮುಕ್ತವಾಗಿರಲಿದೆ. ರಾಷ್ಟ್ರೀಯ ಕ್ರೀಡಾ ದಿನವಾದ ಇದೇ ೨೯ ರಂದು ಕ್ರೀಡಾಪಟುಗಳಿಗೆ ಹಾಗೂ ಸೆಪ್ಟೆಂಬರ್ ೫ ರ ಶಿಕ್ಷಕರ ದಿನದಂದು ಶಿಕ್ಷಕರಿಗೆ ಅಮೃತ್ ಉದ್ಯಾನಕ್ಕೆ ವಿಶೇಷ ಪ್ರವೇಶದ ವ್ಯವಸ್ಥೆ ಮಾಡಲಾಗಿದೆ. ಪ್ರದರ್ಶನದಲ್ಲಿ ಈ ಬಾರಿ ಬಾಲ ವಾಟಿಕ, ಹರ್ಬಲ್, ಬೋನ್ಸಾಯ್ ಉದ್ಯಾನ, ಸೆಂಟ್ರಲ್ ಲಾನ್, ಲಾಂಗ್ ಗಾರ್ಡನ್ ಮತ್ತು ಸರ್ಕ್ಯುಲರ್ ಉದ್ಯಾನ ಸೇರಿದಂತೆ ವಿಶೇಷ ರೀತಿಯ ವಿಷಯಾಧಾರಿತ ಉದ್ಯಾನವನಗಳು ಸೇರಿವೆ. ಸಾರ್ವಜನಿಕರಿಗೆ ಅಮೃತ್ ಉದ್ಯಾನಕ್ಕೆ ಉಚಿತ ಪ್ರವೇಶವಿರಲಿದ್ದು, ಉದ್ಯಾನ ನಿರ್ವಹಣೆಗಾಗಿ ಪ್ರತೀ ಸೋಮವಾರಗಳೊಂದು ಉದ್ಯಾನವನಕ್ಕೆ ಪ್ರವೇಶವಿರುವುದಿಲ್ಲ.

*><><><><><><><*

ಭಾರತದ ಸೌರ ಪಿವಿ ಮಾಡ್ಯೂಲ್ ಉತ್ಪಾದನಾ ಸಾಮರ್ಥ್ಯ ಮತ್ತು ಶುದ್ಧ ಶಕ್ತಿಯನ್ನು ಜನಪ್ರಿಯಗೊಳಿಸುವ ಪ್ರಯತ್ನಗಳ ಗಮನಾರ್ಹ ಸಾಧನೆಯನ್ನು ಪ್ರಧಾನಿ ನರೇಂದ್ರ ಮೋದಿ ಶ್ಲಾಘಿಸಿದ್ದಾರೆ. ಕೇಂದ್ರ ನವ ಮತ್ತು ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ್ ಜೋಶಿ ಅವರ ಪೋಸ್ಟ್ ಉಲ್ಲೇಖಿಸಿ ಪ್ರಧಾನಿ ಮೋದಿ, ಇದು ಸ್ವಾವಲಂಬನೆಯತ್ತ ಮತ್ತೊಂದು ಮೈಲಿಗಲ್ಲು. ಇದು ಭಾರತದ ಉತ್ಪಾದನಾ ಸಾಮರ್ಥ್ಯಗಳ ಯಶಸ್ಸನ್ನು ಮತ್ತು ಶುದ್ಧ ಶಕ್ತಿಯನ್ನು ಜನಪ್ರಿಯಗೊಳಿಸುವ ಪ್ರಯತ್ನಗಳನ್ನು ಪ್ರತಿಬಿಂಬಿಸುತ್ತದೆ ಎಂದು ಹೇಳಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ, ಭಾರತವು ಮಾದರಿಗಳು ಮತ್ತು ತಯಾರಕರ ಅನುಮೋದಿತ ಪಟ್ಟಿಯ ಅಡಿಯಲ್ಲಿ ೧೦೦ ಗಿಗಾವ್ಯಾಟ್ ಸೌರ ಪಿವಿ ಮಾಡ್ಯೂಲ್ ಉತ್ಪಾದನಾ ಸಾಮರ್ಥ್ಯದೊಂದಿಗೆ ಐತಿಹಾಸಿಕ ಮೈಲಿಗಲ್ಲು ಸಾಧಿಸಿದೆ. ಇದು ೨೦೧೪ರಲ್ಲಿ ಕೇವಲ ೨.೩ ಗಿಗಾವ್ಯಾಟ್‌ಗಳಿಂದ ಗಮನಾರ್ಹ ಏರಿಕೆಯಾಗಿದೆ ಎಂದು ತಿಳಿಸಿದ್ದಾರೆ.

*><><><><><><><*

ಭಾರತದ ರಫ್ತಿನ ಮೇಲೆ ಅಮೆರಿಕದ ಇತ್ತೀಚಿನ ಸುಂಕಗಳ ಪರಿಣಾಮ ಅಲ್ಪಕಾಲಿಕವಾಗಿರುತ್ತದೆ ಹಾಗೂ ಒಂದು ಅಥವಾ ಎರಡು ತ್ರೈಮಾಸಿಕದ ಒಳಗೆ ಅದು ತಗ್ಗಲಿದೆ ಎಂದು ಭಾರತದ ಮುಖ್ಯ ಆರ್ಥಿಕ ಸಲಹೆಗಾರ ವಿ.ಅನಂತ ನಾಗೇಶ್ವರನ್ ಅಭಿಪ್ರಾಯಪಟ್ಟಿದ್ದಾರೆ. ಮುಂಬೈನಲ್ಲಿ ನಿನ್ನೆ ಮಾತನಾಡಿದ ಅವರು, ರತ್ನಗಳು ಮತ್ತು ಆಭರಣಗಳು, ಸೀಗಡಿ, ಜವಳಿ ಮುಂತಾದ ಕ್ಷೇತ್ರಗಳು ಆರಂಭಿಕ ಹೊಡೆತವನ್ನು ಎದುರಿಸುತ್ತಿವೆ. ಆದರೆ ಆರ್ಥಿಕತೆಯ ಮೇಲೆ ದೀರ್ಘಕಾಲೀನ ಪರಿಣಾಮ ಸೀಮಿತವಾಗಿರುತ್ತದೆ ಎಂದು ಹೇಳಿದರು. ಕೇಂದ್ರ ಸರ್ಕಾರಕ್ಕೆ ಪರಿಸ್ಥಿತಿಯ ಬಗ್ಗೆ ಅರಿವಿದೆ ಮತ್ತು ಪ್ರಭಾವಿತ ವಲಯಗಳೊಂದಿಗೆ ಈಗಾಗಲೇ ಸಂಭಾಷಣೆಯನ್ನು ಪ್ರಾರಂಭಿಸಿದೆ ಎಂದು ಅನಂತ ನಾಗೇಶ್ವರನ್ ತಿಳಿಸಿದರು.

*><><><><><><><*

ಅಲಾಸ್ಕಾದಲ್ಲಿ ನಾಳೆ ನಡೆಯಲಿರುವ ಅಮೆರಿಕ-ರಷ್ಯಾ ಶೃಂಗಸಭೆಯಲ್ಲಿ ಉಕ್ರೇನ್ ವಿರುದ್ಧದ ಯುದ್ಧವನ್ನು ನಿಲ್ಲಿಸಲು ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಒಪ್ಪದಿದ್ದರೆ ತೀವ್ರ ಪರಿಣಾಮಗಳನ್ನು ಎದುರಿಸಬೇಕಾಗುತ್ತದೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಎಚ್ಚರಿಸಿದ್ದಾರೆ. ಯುರೋಪಿಯನ್ ನಾಯಕರೊಂದಿಗೆ ನಿನ್ನೆ ನಡೆದ ವರ್ಚುವಲ್ ಸಭೆಯಲ್ಲಿ ಟ್ರಂಪ್, ಅಲಾಸ್ಕಾದಲ್ಲಿ ನಡೆಯಲಿರುವ ಅಮೆರಿಕ-ರಷ್ಯಾ ಶೃಂಗಸಭೆಯಲ್ಲಿ ಅಮೆರಿಕವು ಕದನ ವಿರಾಮವನ್ನು ಬಯಸುತ್ತದೆ ಎಂದು ಬಹಳ ಸ್ಪಷ್ಟವಾಗಿ ಹೇಳಿದ್ದಾರೆ ಎಂದು ಫ್ರಾನ್ಸ್ ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರನ್ ತಿಳಿಸಿದ್ದಾರೆ.

*><><><><><><><*

ಆಸ್ಟ್ರೇಲಿಯಾ ಸೇನೆಯ ಮುಖ್ಯಸ್ಥ ಲೆಫ್ಟಿನೆಂಟ್ ಜನರಲ್ ಸೈಮನ್ ಸ್ಟುವರ್ಟ್, ಆಗಸ್ಟ್ ೧೧ ರಿಂದ ೧೪ ರವರೆಗೆ ತಮ್ಮ ಅಧಿಕೃತ ಭಾರತ ಪ್ರವಾಸದ ಭಾಗವಾಗಿ ನಿನ್ನೆ ಪುಣೆಯಲ್ಲಿರುವ ದಕ್ಷಿಣ ಕಮಾಂಡ್ ಪ್ರಧಾನ ಕಚೇರಿಗೆ ಭೇಟಿ ನೀಡಿದರು. ದ್ವಿಪಕ್ಷೀಯ ರಕ್ಷಣಾ ಸಹಕಾರ, ಜಂಟಿ ತರಬೇತಿ, ಸಮರಾಭ್ಯಾಸ, ಮಿಲಿಟರಿ ವಿನಿಮಯ ಕಾರ್ಯಕ್ರಮಗಳು ಮತ್ತು ಭವಿಷ್ಯದ ಯುದ್ಧ ತಂತ್ರಗಳನ್ನು ಹೆಚ್ಚಿಸುವ ಕುರಿತು ಚರ್ಚೆಗಾಗಿ ಅವರು ದಕ್ಷಿಣ ಕಮಾಂಡ್‌ನ ಜನರಲ್ ಆಫೀಸರ್ ಕಮಾಂಡಿಂಗ್-ಇನ್-ಚೀಫ್ ಲೆಫ್ಟಿನೆಂಟ್ ಜನರಲ್ ಧೀರಜ್ ಸೇಥ್ ಅವರನ್ನು ಭೇಟಿ ಮಾಡಿದರು. ಲೆಫ್ಟಿನೆಂಟ್ ಜನರಲ್ ಸೈಮನ್ ಸ್ಟುವರ್ಟ್ ಅವರು ಖಡಕ್ವಾಸ್ಲಾದ ರಾಷ್ಟ್ರೀಯ ರಕ್ಷಣಾ ಅಕಾಡೆಮಿಗೆ ಭೇಟಿ ನೀಡಿದರು.

ಅಲ್ಲಿ ಅವರು "ಸಾಮೂಹಿಕ ಭದ್ರತೆ: ಮಹಾನ್ ಶಕ್ತಿ ಸ್ಪರ್ಧೆಯ ಯುಗ" ಎಂಬ ವಿಷಯದ ಕುರಿತು ಕೆಡೆಟ್‌ಗಳನ್ನು ಉದ್ದೇಶಿಸಿ ಮಾತನಾಡಿದರು.

*><><><><><><><*

ಭಾರತೀಯ ಒಲಿಂಪಿಕ್ ಅಸೋಸಿಯೇಷನ್ ದೆಹಲಿಯಲ್ಲಿ ನಿನ್ನೆ ನಡೆದ ವಿಶೇಷ ಸಾಮಾನ್ಯ ಸಭೆಯಲ್ಲಿ ೨೦೩೦ ರಲ್ಲಿ ಕಾಮನ್‌ವೆಲ್ತ್ ಕ್ರೀಡಾಕೂಟವನ್ನು ಆಯೋಜಿಸುವ ಭಾರತದ ಬಿಡ್‌ಗೆ ಔಪಚಾರಿಕವಾಗಿ ಅನುಮೋದನೆ ನೀಡಿದೆ. ಆಗಸ್ಟ್ ೩೧ ರ ಗಡುವಿನ ಮೊದಲು ಭಾರತ ಅಂತಿಮ ಬಿಡ್‌ಗೆ ತನ್ನ ಪ್ರಸ್ತಾವನೆಯನ್ನು ಸಲ್ಲಿಸಲಿದೆ. ೨೦೩೦ ರ ವರ್ಷವು ನವದೆಹಲಿಯಲ್ಲಿ ಆಯೋಜಿಸಲಾದ ಕಾಮನ್‌ವೆಲ್ತ್ ಕ್ರೀಡಾಕೂಟಕ್ಕೆ ೨೦ ವರ್ಷಗಳನ್ನು ಪೂರೈಸುತ್ತದೆ.

*><><><><><><><*

ಪ್ರಧಾನಮಂತ್ರಿ ನರೇಂದ್ರ ಮೋದಿ ಇದೇ ತಿಂಗಳ ೩೧ ರಂದು ಆಕಾಶವಾಣಿಯಲ್ಲಿ ಪ್ರಸಾರವಾಗುವ ಮಾಸಿಕ ಮನ್ ಕಿ ಬಾತ್ ಕಾರ್ಯಕ್ರಮದಲ್ಲಿ ದೇಶ ಮತ್ತು ವಿದೇಶದಲ್ಲಿರುವ ಭಾರತೀಯ ಸಮುದಾಯದೊಂದಿಗೆ ತಮ್ಮ ಮನದಾಳದ ಮಾತನ್ನು ಹಂಚಿಕೊಳ್ಳಲಿದ್ದಾರೆ.

*><><><><><><><*

ಜಮ್ಮು ಮತ್ತು ಕಾಶ್ಮೀರ, ಹಿಮಾಚಲ ಪ್ರದೇಶ, ಪೂರ್ವ ಮಧ್ಯಪ್ರದೇಶ, ವಿದರ್ಭ ಪ್ರದೇಶ ಮತ್ತು ಆಂಧ್ರ ಪ್ರದೇಶದ ಕರಾವಳಿಯಲಿ ಇಂದು ಭಾರೀ ಮಳೆಯಾಗುವ ಸಾಧ್ಯತೆಯಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

*><><><><><><><*